O.S .No. 345/2014
PW-1

ದಿನಾಂಕ: 05.02.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ವಿ.ಕೆ. ವಕೀಲರಿಂದಃ

ಈಗ 20-30 ವರ್ಷಗಳ ಹಿಂದೆ ಹಣ ಕೊಟ್ಟಾಗ ಪಹಣಿಯನ್ನು ಪ್ರತಿವಾದಿಯ ಹೆಸರಿಗೆ ಮಾಡಿಸಿರುತ್ತೇವೆ. ಗೊತ್ತಾದ ನಂತರ ನಾನು ಅರ್ಜಿಯನ್ನು ಕೊಟ್ಟಿರುತ್ತೇವೆ ಎಂದು ಹೇಳುತ್ತಾರೆ. 20-30 ವರ್ಷಗಳ ಹಿಂದೆ ಪಹಣಿ ಮಾಡಿಸಿದಾಗಿನಿಂದಲೂ ಪ್ರತಿವಾದಿಯೇ ದಾವಾ ಆಸ್ತಿಯ ಸ್ವಾಧೀನದಲ್ಲಿದ್ದರು ಎಂದರೆ ಸರಿಯಲ್ಲ. ಸಾಕ್ಷಿಗೆ ಒಂದು ಭಾವಚಿತ್ರವನ್ನು ತೋರಿಸಿದ್ದು ಅದರಲ್ಲಿ ಕಡಿದಿರುವ ಮರಗಳು ಪ್ರತಿವಾದಿಗೆ ಸೇರಿದ್ದು ಎಂದರೆ ಸಾಕ್ಷಿ ನನ್ನ ಮರ ಎಂದು ಹೇಳುತ್ತಾರೆ. ನ್ಯಾಯಾಲಯಕ್ಕೆ ಹಾಜರುಪಡಿಸಿದ ದಾಖಲೆಗಳನ್ನು ಹೊರತುಪಡಿಸಿ ಬೇರೆ ದಾಖಲೆಗಳು ಇವೆಯೇ ಎಂದರೆ ಸಾಕ್ಷಿ ಇಲ್ಲ ಎಂದು ಹೇಳುತ್ತಾರೆ.

1 ನೇ ಪ್ರತಿವಾದಿ ನನ್ನ ಭಾಮೈದ. ನೀವು ಹಾಗೂ ಪ್ರತಿವಾದಿಗಳು ಒಟ್ಟಿಗೆ ಒಂದೇ ಕುಟುಂಬದಲ್ಲಿ ವಾಸವಾಗಿದ್ದೀರಿ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಈಗಲೂ ಪ್ರತಿವಾದಿಗಳೇ ಸ್ವಾಧೀನ ಇದ್ದು, ಅವರ ಆಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಸ.ನಂ. ಎಷ್ಟು ಎಂದರೆ ಸಾಕ್ಷಿ 48/2 ಎಂದು ಹೇಳುತ್ತಾರೆ. ಸ.ನಂ.48/2 ರಲ್ಲಿ ಒಟ್ಟು ಎಷ್ಟು ಎಕರೆ ಜಮೀನು ಇದೆ ಎಂದರೆ ಸಾಕ್ಷಿ ನನಗೆ ಹೇಳಲಾಗುವುದಿಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿ ದುರಸ್ತು ಆಗಿಲ್ಲ ಎಂದರೆ ಸಾಕ್ಷಿ ನನಗೆ ಅದು ಗೊತ್ತಾಗುವುದಿಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿ 200 ಎಕರೆಗಿಂತಲೂ ಜಾಸ್ತಿ ಇದ್ದು, ಯಾರದು, ಎಷ್ಟು ಭೂಮಿ ಎಂದು ಇಲ್ಲಿಯವರೆಗೂ ನಿಖರವಾಗಿ ಗುರುತಿಸಿಲ್ಲ ಎಂದರೆ ಸಾಕ್ಷಿ ಗೊತ್ತಾಗುವುದಿಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿಯನ್ನು ಗುರುತಿಸಲು ಸರ್ವೆ ನಕಾಶೆಯನ್ನು ಕೊಟ್ಟಿದ್ದೀರಾ ಎಂದರೆ ಸಾಕ್ಷಿ ಅದು ಗೊತ್ತೆ ಇಲ್ಲ ಎಂದು ಹೇಳುತ್ತಾರೆ. ನೀವು ಹಾಜರುಪಡಿಸಿರುವ ದಾಖಲೆಗಳಲ್ಲಿ ಸರ್ವೆ ನಕಾಶೆಯನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿ ಗೊತ್ತೆ ಇಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿ ದುರಸ್ತು ಆಗದೇ ಇರುವುದರಿಂದ, ಯಾರದ್ದು, ಯಾವ ಭೂಮಿ ಎಂದು ಹೇಳಲು ಆಗುವುದಿಲ್ಲ, ಸುಳ್ಳು ಚೆಕ್ಕುಬಂಧಿ ಹಾಕಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಅನುಭವ ಇರುವ ಜಮೀನಿಗೆ ಚೆಕ್ಕುಬಂಧಿ ಹಾಕಿ

ಸುಳ್ಳು ದಾವೆ ಹೂಡಿದ್ದೀರಿ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಚೆಕ್ಕುಬಂಧಿ ಹೇಳಲಾಗುತ್ತದೆಯೇ ಎಂದರೆ ಸಾಕ್ಷಿ ಹೇಳುತ್ತೇನೆ ಎಂದು ಹೇಳುತ್ತಾರೆ. ದಾವಾ ಆಸ್ತಿಯ ಉತ್ತರಕ್ಕೆಃ ಚೆರಮೆನ್ ನಾಗಣ್ಣ. ಪೂರ್ವಕ್ಕೆಃ ಚೆರಮೆನ್ ನಾಗಣ್ಣ. ದಕ್ಷಿಣಕ್ಕೆಃ ಸರ್ಕಾರಿ ರಸ್ತೆ ಮತ್ತು ಕಾಲುವೆ. ಉತ್ತರಕ್ಕಿರುವ ನಾಗಣ್ಣ ನವರ ಜಮೀನಿನ ಪೂರ್ವಕ್ಕೆಃ ಮರಚ್ಚಯ್ಯನ ಮಕ್ಕಳು ಇದ್ದಾರೆ ಎಂದು ಹೇಳುತ್ತಾರೆ. ಮರಚ್ಚಯ್ಯನ ರವರ ಮಕ್ಕಳ ಜಮೀನಿನ ಸ.ನಂ. ಗೊತ್ತಾ ಎಂದರೆ ಸಾಕ್ಷಿ ಇಲ್ಲ ಎಂದು ಹೇಳುತ್ತಾರೆ. ಉತ್ತರದ ನಾಗಣ್ಣನ ಸ.ನಂ. ಗೊತ್ತಾ ಎಂದರೆ ಸಾಕ್ಷಿ ಇಲ್ಲ ಎಂದು ಹೇಳುತ್ತಾರೆ. ನೀವು ಸ್ವಾದೀನದಲ್ಲಿ ಇದ್ದಿದ್ದರೆ ಯಾರ್ಯಾರು ಯಾವ ಯಾವ ದಿಕ್ಕಿನಲ್ಲಿ ಇದ್ದಾರೆಂದು ಹೇಳುತ್ತಿದ್ದೀರಿ, ನೀವು ಸ್ವಾಧೀನದಲ್ಲಿ ಇಲ್ಲದೇ ಇರುವುದರಿಂದ, ಸುಳ್ಳು ಚೆಕ್ಕುಬಂಧಿ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ನಿಮಗೆ ಯಾವುದೇ ವಿಚಾರ ಗೊತ್ತಿಲ್ಲದೇ ಇದ್ದರೂ, 1 ನೇ ಪ್ರತಿವಾದಿಯ ಆಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಚೆಕ್ಕುಬಂಧಿ ಸಲ್ಲಿಸಿ, ಸುಳ್ಳು ಸಾಕ್ಷ್ಯನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ನೀವು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ದಾಖಲೆಗಳಿಗೂ, ದಾವಾ ಆಸ್ತಿಗೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿ ಯಾವ ದಿನಾಂಕ, ತಿಂಗಳು, ವರ್ಷದಂದು ತೊಂದರೆ ಕೊಟ್ಟರು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ಹೇಳುತ್ತಾರೆ. ಸದರಿ ವಿಚಾರವಾಗಿ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದೀರಾ ಎಂದರೆ ಸಾಕ್ಷಿ ಕೊಟ್ಟಿದ್ದೆ ಎಂದು ಹೇಳುತ್ತಾರೆ. ದೂರು ಕೊಟ್ಟ ಬಗ್ಗೆ ದಾಖಲಾತಿ ಇದೆಯೇ ಎಂದರೆ ಸಾಕ್ಷಿ ಇಲ್ಲ, ಸಿವಿಲ್ ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳುವಂತೆ ತಿಳಿಸಿದ್ದರು ಎಂದು ಹೇಳುತ್ತಾರೆ. ಪೊಲೀಸರು ನಿಮಗೆ ಸಿವಿಲ್ ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳುವಂತೆ ತಿಳಿಸಿ ದಾಖಲಾತಿ ಕೊಟ್ಟಿಲ್ಲ ಎಂದರೆ ಸಾಕ್ಷಿ ಅದೆಲ್ಲ ನನಗೆ ಗೊತ್ತಾಗುವುದಿಲ್ಲ ಎಂದು ಹೇಳುತ್ತಾರೆ. ನೀವು ಯಾವುದೇ ದೂರು ದಾಖಲಿಸದೇ ಇದ್ದರೂ, ದಾಖಲಿಸಿದ್ದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ದಾವಾ ಸ್ವತ್ತಿನಲ್ಲಿ ಯಾರು ಸ್ವಾಧೀನ ಇದ್ದಾರೆಂದು ತನಿಖೆ ಮಾಡಲು ನಿಮಗೆ ತೊಂದರೆ ಇಲ್ಲ ಎಂದರೆ ಸಾಕ್ಷಿ ನಾನು ಕೊಡುವುದಿಲ್ಲ ಎಂದು ಹೇಳುತ್ತಾರೆ. ದಾವಾ ಆಸ್ತಿಯಲ್ಲಿ ನೀವು ಸ್ವಾದೀನ ಇಲ್ಲದೇ ಇರುವುದರಿಂದ ತನಿಖೆ ಮಾಡಲು ಸೇರಿಸುವುದಿಲ್ಲ

ಎಂದು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಗೆ ದಬ್ಬಾಳಿಕೆ ಮಾಡಿ ನೀವೇ ತೊಂದರೆ ಕೊಡುತ್ತಿದ್ದೀರಿ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.